# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1479 (1796)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನ್ಯ ಇಲಾಖಾಧಿಕಾರಿಗಳ ಹಸ್ತಕ್ಷೇಪ ಕುರಿತು

(ಅ) ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳಿಗೆ ಮತ್ತು ನೌಕರರುಗಳಿಗೆ ಅನ್ಯ ಇಲಾಖೆಯಿಂದ ಅನ್ಯ ಕಾರ್ಯನಿರ್ವಹಿಸಲು ನೇರವಾಗಿ ಆದೇಶ ಪಡೆಯಬಹುದೇ; (ವಿವರ ನೀಡುವುದು)

(ಆ) ಇತ್ತೀಚೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳಿಗೆ ಮತ್ತು ನೌಕರರುಗಳಿಗೆ ಕಂದಾಯ ಇಲಾಖೆಯಿಂದ ನೇರವಾಗಿ ಆದೇಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಇ) ಅನ್ಯ ಇಲಾಖೆಯಿಂದ ಅಗುತ್ತಿರುವ ಆದೇಶಗಳನ್ನು ಪಾಲಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕೆಲಸ ನಿರ್ವಹಿಸುವ ಕ್ಷೇತ್ರ ಮಟ್ಟದ ನೌಕರರು ತಮ್ಮ ಮೂಲ ಇಲಾಖೆಯಲ್ಲಿನ ಕೆಲಸದಲ್ಲಿ ಪ್ರಗತಿ ಸಾಧಿಸಲು ತೊಂದರೆಗೀಡಾಗಿರುವುದರ ಕುರಿತಾದ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ವಿವರ ನೀಡುವುದು)